**Akashvani : Bangalore**
**National Bulletin In Kannada**
**21.05.2024 / 19.35 hrs**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**<><*<><>*><>**

ಮುಖ್ಯಾಂಶಗಳು

**೧. ವಾರಾಣಸಿಯಲ್ಲಿ ಮಹಿಳೆಯರೊಂದಿಗೆ ಬಿಜೆಪಿ ಹಿರಿಯ ನಾಯಕ, ಪ್ರಧಾನಮಂತ್ರಿ ನರೇಂದ್ರ ಮೋದಿ ಸಂವಾದ; ಜಾರ್ಖಂಡ್‌ನ ಜೆಮ್‌ಶೆಡ್‌ಪುರದಲ್ಲಿ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಪ್ರಚಾರ**

**೨. ಕರ್ನಾಟಕದ ಕರಾವಳಿ ಸೇರಿದಂತೆ ದಕ್ಷಿಣ ಭಾರತದಲ್ಲಿ ಧಾರಾಕಾರ ಮಳೆ**

**೩. ವಿಶ್ವ ಬ್ಯಾಡ್ಮಿಂಟನ್ ಫೆಡರೇಶನ್ ರ‍್ಯಾಂಕಿಂಗ್; ಭಾರತದ ಸಾತ್ವಿಕ - ಚಿರಾಗ್ ಜೋಡಿ ಮೊದಲ ಸ್ಥಾನ**

**೪. ಐಪಿಎಲ್ ಕ್ರಿಕೆಟ್; ಮೊದಲ ಕ್ವಾಲಿಫೈಯರ್ ಪಂದ್ಯದಲ್ಲಿ ಕೋಲ್ಕತ್ತಾ ನೈಟ್ ರೈಡರ್ಸ್ - ಸನ್ ರೈಸರ್ಸ್ ಹೈದರಾಬಾದ್ ಮುಖಾಮುಖಿ**

**<><*<><>*><>**

ಲೋಕಸಭೆಯ ಆರನೇ ಮತ್ತು ಏಳನೇ ಹಂತದ ಚುನಾವಣೆಗೆ ವಿವಿಧ ರಾಜಕೀಯ ಪಕ್ಷಗಳಿಂದ ಪ್ರಚಾರ ಬಿರುಸುಗೊಂಡಿದೆ. ಬಿಹಾರದ ಮೋತಿಹಾರ್‌ನ ಗಾಂಧಿ ಮೈದಾನದಲ್ಲಿಂದು ನಡೆದ ಸಾರ್ವಜನಿಕ ಸಭೆಯಲ್ಲಿ ಬಿಜೆಪಿ ಹಿರಿಯ ನಾಯಕ ಮತ್ತು ಪ್ರಧಾನಮಂತ್ರಿ ನರೇಂದ್ರ ಮೋದಿ ಪಾಲ್ಗೊಂಡಿದ್ದರು. ಈ ವೇಳೆ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷವು ವಂಶಾಡಳಿತ ಪಕ್ಷವಾಗಿದೆ. ಕೇವಲ ಒಂದು ಕುಟುಂಬದ ಹಿತಾಸಕ್ತಿಗಾಗಿ ಕೆಲಸ ಮಾಡುತ್ತಿದೆ ಎಂದು ಆರೋಪಿಸಿದರು. ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ನೇತೃತ್ವದ ಐಎನ್‌ಡಿಐ ಮೈತ್ರಿಕೂಟ ಪರಾಭವಗೊಳ್ಳಲಿದೆ. ಭ್ರಷ್ಟಾಚಾರ ಪ್ರಕರಣ ಮತ್ತು ದೇಶ ವಿರೋಧಿ ಪ್ರಚಾರದಲ್ಲಿ ತೊಡಗಿರುವವರು ಸೂಕ್ತ ಶಿಕ್ಷೆ ಅನುಭವಿಸಲಿದ್ದಾರೆ ಎಂದರು. ಮಹಾತ್ಮಾ ಗಾಂಧಿಯವರ 'ಸತ್ಯಾಗ್ರಹ ಮತ್ತು ಸ್ವಚ್ಛಗ್ರಹ' ದಿಂದ ಪ್ರೇರಣೆ ಪಡೆದಿದ್ದೇನೆ. ಆದರೆ, ಕಾಂಗ್ರೆಸ್‌ನವರು ಮಹಾತ್ಮಾಗಾಂಧಿಯವರ ಕನಸುಗಳನ್ನು ನನಸಾಗಿಸಲು ವಿಫಲರಾಗಿದ್ದಾರೆ.

ಅವರ 'ಸ್ವಚ್ಛಗೃಹ' ಪರಿಕಲ್ಪನೆಯಿಂದ ಪ್ರೇರಣೆಗೊಂಡು ಪ್ರತಿ ಮನೆಗೂ ಶೌಚಾಲಯ ಕಲ್ಪಿಸುವ ಯೋಜನೆ ಮೂಡಿತು. ಬಡ ಕುಟುಂಬದ ಪ್ರತಿ ಮನೆಗೆ ವಿದ್ಯುತ್ ಮತ್ತು ಅನಿಲ ಸಂಪರ್ಕ ಒದಗಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದರು. ೨೧ನೇ ಶತಮಾನದ ಆಕಾಂಕ್ಷೆಗಳು ಮತ್ತು ಕನಸಗಳನ್ನು ಈಡೇರಿಸಲು ಎನ್‌ಡಿಎ ಬದ್ಧವಾಗಿದೆ. ಮುಂದಿನ ಐದು ವರ್ಷಗಳು ಕೇಂದ್ರದಲ್ಲಿ ನಿರ್ಣಾಯಕ ಸರ್ಕಾರವು ಕ್ಷಿಪ್ರಗತಿಯಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲಿದೆ ಎಂದು ಅವರು ಭರವಸೆ ನೀಡಿದರು. ನಂತರ ಪ್ರಧಾನಿ ನರೇಂದ್ರ ಮೋದಿ, ಬಿಹಾರದ ಮಹಾರಾಜ್‌ಗಂಜ್ ಲೋಜಸಭಾ ಕ್ಷೇತ್ರ ಮತ್ತು ಉತ್ತರಪ್ರದೇಶದ ಪ್ರಯಾಗ್ ರಾಜ್‌ನಲ್ಲಿ ನಡೆದ ಪ್ರಚಾರ ರ‍್ಯಾಲಿಗಳಲ್ಲಿ ಪಾಲ್ಗೊಂಡರು. ಇದೇ ವೇಳೆ ತಮ್ಮ ಲೋಕಸಭಾ ಕ್ಷೇತ್ರವಾದ ವಾರಾಣಸಿಯ ಸಂಪೂರ್ಣಾನಂದ್ ಸಂಸ್ಕೃತ ವಿಶ್ವವಿದ್ಯಾಲಯದಲ್ಲಿ ಆಯೋಜಿಸಿದ್ದ ಮಾತೃ ಶಕ್ತಿ ಸಮ್ಮೇಳನದಲ್ಲಿ ಭಾಗವಹಿಸಿದ್ದರು. ಈ ಸಂದರ್ಭದಲ್ಲಿ ಗೃಹಿಣಿಯರು, ವೈದ್ಯರು, ಶಿಕ್ಷಕಿಯರು, ಉದ್ಯಮಿಗಳು, ನ್ಯಾಯವಾದಿಗಳು, ಕ್ರೀಡಾಪಟುಗಳು ಸೇರಿದಂತೆ ೨೫ ಸಾವಿರಕ್ಕೂ ಹೆಚ್ಚು ಮಹಿಳೆಯರೊಂದಿಗೆ ಸಂವಾದ ನಡೆಸಿದರು. ಜಾರ್ಖಂಡ್‌ನ ಬೊಕಾರೊದಲ್ಲಿ ನಡೆದ ಚುನಾವಣಾ ರ‍್ಯಾಲಿಯಲ್ಲಿ ಪಕ್ಷದ ಅಭ್ಯರ್ಥಿ ಪರವಾಗಿ ರಕ್ಷಣಾ ಸಚಿವ ಮತ್ತು ಬಿಜೆಪಿ ಹಿರಿಯ ನಾಯಕ ರಾಜನಾಥ್ ಸಿಂಗ್ ಮತಯಾಚಿಸಿದರು. ಈ ವೇಳೆ ಮಾತನಾಡಿದ ಅವರು, ಜಾರ್ಖಂಡ್ ಮುಕ್ತಿ ಮೋರ್ಚಾ ಪಕ್ಷದ ನೇತೃತ್ವದ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಜಾಖಂಡ್‌ನಲ್ಲಿ ಭ್ರಷ್ಟಾಚಾರ ಅಧಿಕವಾಗಿದೆ. ರಾಜ್ಯದಲ್ಲಿ ಅಭಿವೃದ್ಧಿ ಕಾರ್ಯಗಳು ಕ್ಷೀಣಿಸಿವೆ ಎಂದು ಆರೋಪಿಸಿದರು. ಸಮಗ್ರ ಅಭಿವೃದ್ಧಿಗಾಗಿ ಅಂದಿನ ಪ್ರಧಾನಮಂತ್ರಿ ಅಟಲ್ ಬಿಹಾರಿ ವಾಜಪೇಯಿ ಅವರು, ಜಾರ್ಖಂಡ್‌ಗೆ ಪ್ರತ್ಯೇಕ ರಾಜ್ಯದ ಸ್ಥಾನಮಾನ ಕಲ್ಪಿಸಿದರು. ಪ್ರಧಾನಮಂತ್ರಿ ನರೇಂದ್ರ ಮೋದಿ ನೇತೃತ್ವದ ಸರ್ಕಾರದ ಕಳೆದ ಹತ್ತು ವರ್ಷದ ಅವಧಿಯಲ್ಲಿ ದೇಶದ ಬ್ಯಾಂಕ್‌ಗಳು ಲಾಭದಲ್ಲಿವೆ. ಹೊಸ ಹಣಕಾಸು ವರ್ಷದಲ್ಲಿ ಸಾರ್ವಜನಿಕ ಮತ್ತು ಖಾಸಗಿ ವಲಯದ ಬ್ಯಾಂಕ್‌ಗಳ ನಿವ್ವಳ ಲಾಭವು ೩ ಲಕ್ಷ ಕೋಟಿ ರೂಪಾಯಿ ದಾಟಿದೆ ಎಂದು ರಾಜನಾಥ್ ಸಿಂಗ್ ಹೇಳಿದರು. ಇನ್ನೊಂದೆಡೆ ಉತ್ತರಪ್ರದೇಶ ಮುಖ್ಯಮಂತ್ರಿ ಮತ್ತು ಬಿಜೆಪಿ ಹಿರಿಯ ನಾಯಕ ಯೋಗಿ ಆದಿತ್ಯನಾಥ್, ಬಲರಾಮ್‌ಪುರ, ಸಿದ್ದಾರ್ಥ್ ನಗರ, ಸಂತ ಕಬೀರ್ ನಗರ, ಬಸ್ತಿ ವಾರಾಣಸಿ ಮತ್ತು ಅಜಮ್‌ಘಡದಲ್ಲಿ ಪ್ರಚಾರ ರ‍್ಯಾಲಿಗಳನ್ನುದ್ದೇಶಿಸಿ ಮಾತನಾಡಿದರು. ಸಮಾಜವಾದಿ ಪಕ್ಷದ ಮುಖ್ಯಸ್ಥ ಅಖಿಲೇಶ್ ಯಾದವ್, ಅಜಮ್‌ಘಡ ಮತ್ತು ಬಧೋಹಿ ಜಿಲ್ಲೆಗಳಲ್ಲಿ ನಡೆದ ಸಾರ್ವಜನಿಕ ಸಭೆಗಳಲ್ಲಿ ಭಾಗವಹಿಸಿದ್ದರು. ಇದೇ ವೇಳೆ ಬಹುಜನ ಸಮಾಜ ಪಕ್ಷ ಮುಖ್ಯಸ್ಥೆ ಮಾಯವತಿ, ಜೋನ್‌ಪುರ್ ಜಿಲ್ಲೆಯಲ್ಲಿ ಪಕ್ಷದ ಅಭ್ಯರ್ಥಿ ಪರ ಮತಯಾಚಿಸಿದರು. ಜಾರ್ಖಂಡ್‌ನ ಜೆಮ್‌ಶೆಡ್‌ಪುರದಲ್ಲಿ ನಡೆದ ಚುನಾವಣಾ ರ‍್ಯಾಲಿ ಉದ್ದೇಶಿಸಿ ಮಾತನಾಡಿದ ದೆಹಲಿ ಮುಖ್ಯಮಂತ್ರಿ

ಮತ್ತು ಆಮ್ ಆದ್ಮಿ ಪಕ್ಷದ ರಾಷ್ಟ್ರೀಯ ಸಂಚಾಲಕ ಅರವಿಂದ್ ಕೇಜ್ರಿವಾಲ್, ರಾಜಕೀಯ ಪಿತೂರಿಯಿಂದಾಗಿ ಜಾರ್ಖಂಡ್ ಮಾಜಿ ಮುಖ್ಯಮಂತ್ರಿ ಹೇಮಂತ್ ಸೊರೆನ್ ಅವರನ್ನು ಬಂಧಿಸಲಾಗಿದೆ ಎಂದು ಆರೋಪಿಸಿದರು.

**<><*<><>*><>**

ಅಬಕಾರಿ ನೀತಿ ಹಗರಣಕ್ಕೆ ಸಂಬಂಧಿಸಿದ ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಬಂಧಿತರಾಗಿರುವ ದೆಹಲಿ ಮಾಜಿ ಉಪ ಮುಖ್ಯಮಂತ್ರಿ ಮತ್ತು ಆಮ್ ಆದ್ಮಿ ಪಕ್ಷದ ನಾಯಕ ಮನಿಶ್ ಸಿಸೋಡಿಯಾ ಅವರ ನ್ಯಾಯಾಂಗ ಬಂಧನದ ಅವಧಿಯನ್ನು ದೆಹಲಿಯ ರೋಸ್ ಅವೆನ್ಯು ನ್ಯಾಯಾಲಯ ಇದೇ ೩೧ ರವರೆಗೆ ವಿಸ್ತರಿಸಿದೆ. ಪ್ರಕರಣದ ವಿಚಾರಣೆ ನಡೆಸಿದ ನ್ಯಾಯಾಲಯ, ಮುಂದಿನ ವಿಚಾರಣೆಯನ್ನು ಇದೇ ೩೧ ಕ್ಕೆ ಮುಂದೂಡಿದೆ. ಸಿಸೋಡಿಯಾ ಅವರಿಗೆ ಜಾಮೀನು ನೀಡದಂತೆ ನ್ಯಾಯಾಲಯಕ್ಕೆ ಸಿಬಿಐ ಮತ್ತು ಜಾರಿ ನಿರ್ದೇಶನಾಲಯ ಮನವಿ ಮಾಡಿತು. ಕಳೆದ ವರ್ಷ ಫೆಬ್ರವರಿ ೨೬ ರಿಂದ ಸಿಸೋಡಿಯಾ ನ್ಯಾಯಾಂಗ ಬಂಧನದಲಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಬಿಐ, ಕಳೆದ ವರ್ಷ ಸಿಸೋಡಿಯಾ ಅವರನ್ನು ಬಂಧಿಸಿತ್ತು. ನಂತರ ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಅವರನ್ನು ಇ.ಡಿ ಅಧಿಕಾರಿಗಳು ಬಂಧಿಸಿದ್ದರು. ಇನ್ನೊಂದೆಡೆ, ಸಿಸೋಡಿಯಾ ಅವರ ಜಾಮೀನು ಅರ್ಜಿ ದೆಹಲಿ ಹೈಕೋರ್ಟ್‌ನಲ್ಲಿ ಬಾಕಿ ಇದೆ. ಇದೇ ೧೪ರಂದು ವಿಚಾರಣೆ ನಡೆಸಿದ್ದ ನ್ಯಾಯಾಲಯ, ತನ್ನ ತೀರ್ಪನ್ನು ಕಾಯ್ದಿರಿಸಿದೆ.

**<><*<><>*><>**

ಮುಂದಿನ ಮೂರು ದಿನಗಳವರೆಗೆ ವಾಯುವ್ಯ ಭಾರತ, ಉತ್ತರ ಮಧ್ಯಪ್ರದೇಶ ಮತ್ತು ಗುಜರಾತ್‌ನ ಬಯಲು ಪ್ರದೇಶಗಳಲ್ಲಿ ತೀವ್ರ ಶಾಖದ ಪರಿಸ್ಥಿತಿ ಇರಲಿದ್ದು, ಭಾರತೀಯ ಹವಾಮಾನ ಇಲಾಖೆ ರೆಡ್ ಅಲರ್ಟ್ ಘೋಷಿಸಿದೆ. ಪಂಜಾಬ್, ಹರ್ಯಾಣ, ಚಂಡೀಗಢ, ದೆಹಲಿ, ಪಶ್ಚಿಮ ರಾಜಸ್ಥಾನ, ಪಶ್ಚಿಮ ಉತ್ತರ ಪ್ರದೇಶ, ಪೂರ್ವ ರಾಜಸ್ಥಾನ ಮತ್ತು ವಾಯವ್ಯ ಮಧ್ಯಪ್ರದೇಶದಲ್ಲಿ ಇದೇ ೨೪ ರವರೆಗೆ ತಾಪಮಾನ ಏರಿಕೆಯಾಗಲಿದೆ. ಶುಕ್ರವಾರದವರೆಗೆ ಕರ್ನಾಟಕದ ಕರಾವಳಿ ಮತ್ತು ದಕ್ಷಿಣ ಒಳನಾಡು, ತಮಿಳುನಾಡು, ಪುದುಚೇರಿ, ಕಾರೈಕಲ್, ಮಾಹೆಯಲ್ಲಿ ಆರೆಂಜ್ ಅಲರ್ಟ್ ಘೋಷಿಸಲಾಗಿದೆ. ಈ ಪ್ರದೇಶಗಳಲ್ಲಿ ಭಾರೀ ಮಳೆಯಾಗುವ ನಿರೀಕ್ಷೆಯಿದ್ದು, ಕೇರಳದಲ್ಲಿ ನಾಳೆಯವರೆಗೆ ಅತಿ ಹೆಚ್ಚು ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಕೇರಳದಲ್ಲಿ ಮುಂದಿನ ಐದು ದಿನಗಳ ಕಾಲ ಧಾರಾಕಾರ ಮಳೆಯಾಗುವ ಸಾಧ್ಯತೆಯಿದೆ. ಪಟ್ಟಣತಿಟ್ಟು ಮತ್ತು ಇಡುಕಿ ಜಿಲ್ಲೆಯಲ್ಲಿ ರೆಡ್ ಅಲರ್ಟ್ ಘೋಷಿಸಲಾಗಿದೆ.

ತಿರುವನಂತಪುರಂ, ಕೊಲ್ಲಂ, ಅಲಪ್ಪುಳ, ಪಟ್ಟಾಯಮ್, ಎರ್ನಾಕುಲಂ, ತ್ರಿಶೂರ್, ಪಾಲಕ್ಕಾಡ್ ಮತ್ತು ಮಲಪುರಂ ಜಿಲ್ಲೆಗಳಲ್ಲಿ ಆರೆಂಜ್ ಅಲರ್ಟ್ ಘೋಷಿಸಲಾಗಿದೆ. ಮೀನುಗಾರರು ಸಮುದ್ರಕ್ಕೆ ಇಳಿಯದಂತೆ ಭಾರತೀಯ ಹವಾಮಾನ ಇಲಾಖೆ ಎಚ್ಚರಿಕೆ ನೀಡಿದೆ.

<><*<><>*><>

ಲಂಡನ್‌ನಿಂದ ಸಿಂಗಾಪುರಕ್ಕೆ ಹೊರಟ್ಟಿದ ಸಿಂಗಾಪುರ ಏರ್‌ಲೈನ್ಸ್ ವಿಮಾನವು ಪ್ರಕ್ಷುಬ್ಧ ಪರಿಸ್ಥಿತಿಯ ಕಾರಣ ಬ್ಯಾಂಕಾಕ್‌ನಲ್ಲಿಂದು ತುರ್ತು ಭೂಸ್ಪರ್ಶ ಮಾಡಿತು. ಘಟನೆಯಲ್ಲಿ ಒಬ್ಬ ವ್ಯಕ್ತಿ ಮೃತಪಟ್ಟಿದ್ದು, ಅನೇಕರು ಗಾಯಗೊಂಡಿದ್ದಾರೆ. ವಿಮಾನದಲ್ಲಿ ಒಟ್ಟು ೨೧೧ ಪ್ರಯಾಣಿಕರು ಮತ್ತು ೧೮ ವಿಮಾನ ಸಿಬ್ಬಂದಿ ಪ್ರಯಾಣಿಸುತ್ತಿದ್ದರು. ಘಟನೆಯ ಕಾರಣ ಕುರಿತು ತನಿಖೆ ಪ್ರಗತಿಯಲ್ಲಿದೆ ಎಂದು ಸಿಂಗಾಪುರ ಏರ್‌ಲೈನ್ಸ್ ಮಾಹಿತಿ ನೀಡಿದೆ.

<><*<><>*><>

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ -ಸೆನ್ಸೆಕ್ಸ್ ೫೩ ಪಾಯಿಂಟ್‌ಗಳು ಏರಿಕೆಯಾಗಿದ್ದು, ದಿನದ ಅಂತ್ಯಕ್ಕೆ ೭೩ ಸಾವಿರದ ೯೫೩ ಪಾಯಿಂಟ್‌ಗಳು ದಾಖಲಾಗಿವೆ. ಇದೇ ವೇಳೆ ರಾಷ್ಟ್ರೀಯ ಸಂವೇದಿ ಸೂಚ್ಯಂಕ- ನಿಫ್ಟಿ ೨೭ ಪಾಯಿಂಟ್‌ಗಳು ಏರಿಕೆಯಾಗಿದ್ದು, ದಿನದ ಅಂತ್ಯಕ್ಕೆ ೨೨ ಸಾವಿರದ ೫೨೯ ಪಾಯಿಂಟ್‌ಗಳು ದಾಖಲಾಗಿವೆ. ಡಾಲರ್ ಎದುರು ರೂಪಾಯಿ ಮೌಲ್ಯ ೮೩ ರೂಪಾಯಿ ೩೧ ಪೈಸೆ ದಾಖಲಾಗಿದೆ.

<><*<><>*><>

ಥಾಯ್ಲೆಂಡ್ ಓಪನ್ ಸೂಪರ್-೫೦೦ ಬ್ಯಾಡ್ಮಿಂಟನ್ ಚಾಂಪಿಯನ್‌ಶಿಪ್‌ನಲ್ಲಿ ಗೆಲ್ಲುವ ಮೂಲಕ ವಿಶ್ವ ಬ್ಯಾಡ್ಮಿಂಟನ್ ಫೆಡರೇಶನ್ ರ್‍ಯಾಂಕಿಂಗ್‌ನಲ್ಲಿ ಭಾರತದ ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಜೋಡಿ ಮೊದಲನೇ ಸ್ಥಾನಕ್ಕೆ ಏರಿದೆ. ಈ ಪಂದ್ಯಾವಳಿಗೂ ಮೊದಲು ಈ ಜೋಡಿಯು ಮೂರನೇ ಸ್ಥಾನದಲ್ಲಿತ್ತು. ಇದೀಗ ಚೀನಾದ ಲಿಯಾಂಗ್ ವೀ ಕೆಂಗ್ ಮತ್ತು ವಾಂಗ್ ಚಾಂಗ್ ಜೋಡಿಯನ್ನು ಹಿಂದಿಕ್ಕಿ ಈ ಸಾಧನೆ ಮಾಡಿದೆ.

<><*<><>*><>

ಐಪಿಎಲ್ ಕ್ರಿಕೆಟ್ ಟೂರ್ನಿಯಲ್ಲಿ ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಮೊದಲ ಕ್ವಾಲಿಫೈಯರ್ ಪಂದ್ಯದಲ್ಲಿ ಕೋಲ್ಕತ್ತಾ ನೈಟ್ ರೈಡರ್ಸ್ ಹಾಗೂ ಸನ್ ರೈಸರ್ಸ ಹೈದರಾಬಾದ್ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ಸನ್ ರೈಸರ್ಸ

ಹೈದರಾಬಾದ್ ತಂಡ ಬ್ಯಾಟಿಂಗ್ ಆಯ್ಕೆ ಮಾಡಿಕೊಂಡಿದೆ. ಈ ಪಂದ್ಯದಲ್ಲಿ ಗೆಲ್ಲುವ ತಂಡ ನೇರವಾಗಿ ಫೈನಲ್ ತಲುಪಲಿದ್ದು, ಸೋಲುವ ತಂಡಕ್ಕೆ ಫೈನಲ್ ತಲುಪಲು ಮತ್ತೊಂದು ಅವಕಾಶ ಸಿಗಲಿದೆ.

<><*<><>*><>

ಜಪಾನ್‌ನ ಕೋಬೆಯಲ್ಲಿ ನಡೆಯುತ್ತಿರುವ ವಿಶ್ವ ಪ್ಯಾರಾ ಅಥ್ಲೆಟಿಕ್ ಚಾಂಪಿಯನ್‌ಶಿಪ್ ಮಹಿಳೆಯರ ಎಫ್-೧೫ ಕ್ಲಬ್ ಥ್ರೋ ವಿಭಾಗದಲ್ಲಿ ಭಾರತದ ಏಕ್ತಾ ಭ್ಯಾನ್ ಚಿನ್ನದ ಪದಕ ಗೆದ್ದಿದ್ದಾರೆ. ಅವರು, ೨೦.೧೨ ಮೀಟರ್ ದೂರ ಎಸೆಯುವ ಮೂಲಕ ಈ ಸಾಧನೆ ಮಾಡಿದ್ದಾರೆ. ಇದೇ ವೇಳೆ ಭಾರತದ ಕಾಶಿಶ್ ಲಾಕ್ರಾ ಬೆಳ್ಳಿ ಪದಕ ಗೆದ್ದಿದ್ದಾರೆ. ಅಲ್ಜಿರಿಯಾದ ನಾಡ್ಜೆಟ್ ಬೌಚೆರ್ಫ್ ಕಂಚಿನ ಪದಕ ತಮ್ಮದಾಗಿಸಿಕೊಂಡಿದ್ದಾರೆ.

<><*<><>*><>

ಭಾರತದ ಜೂನಿಯರ್ ಪುರುಷರ ಹಾಕಿ ತಂಡ ಬೆಲ್ಜಿಯಂ ವಿರುದ್ಧ ೪-೨ ಗೋಲುಗಳ ಅಂತರದಿಂದ ಜಯಗಳಿಸಿದೆ. ನೆದರ್ಲೆಂಡ್ಸ್‌ನ ಬ್ರೆಡಾದಲ್ಲಿ ನಾಳೆ ಬೆಲ್ಜಿಯಂ ವಿರುದ್ಧ ಭಾರತ ಸೆಣಸಲಿದೆ.

<><*<><>*><>

ಇರಾನ್‌ನಲ್ಲಿ ಜೂನ್ ೨೮ ರಂದು ಅಧ್ಯಕ್ಷೀಯ ಚುನಾವಣೆ ಜರುಗಲಿದೆ. ಇರಾನ್ ಹಂಗಾಮಿ ಅಧ್ಯಕ್ಷ ಮೊಹಮ್ಮದ್ ಮೊಕ್ಬರ್, ನ್ಯಾಯಾಂಗ ಮುಖ್ಯಸ್ಥ, ಸಂಸತ್ ಸ್ಪೀಕರ್ ಸೇರಿದಂತೆ ಸಂಪುಟ ಸಚಿವರು ಮತ್ತು ಉನ್ನತ ಅಧಿಕಾರಿಗಳು ಭಾಗವಹಿಸಿದ್ದ ಇಂದಿನ ಸಂಭೆಯಲ್ಲಿ ಚುನಾವಣಾ ದಿನಾಂಕವನ್ನು ಘೋಷಿಸಲಾಯಿತು. ಇದಕ್ಕೂ ಮುನ್ನ, ಹೆಲಿಕಾಪ್ಟರ್ ದುರಂತದಲ್ಲಿ ಇರಾನ್ ಅಧ್ಯಕ್ಷ ಡಾ.ಸೈಯ್ಯದ್ ಇಬ್ರಾಹಿಂ ರೈಸಿ ಅವರ ನಿಧನದ ಹಿನ್ನೆಲೆಯಲ್ಲಿ ಇರಾನ್ ಉಪಾಧ್ಯಕ್ಷರಾಗಿದ್ದ ಮೊಹಮ್ಮದ್ ಮೊಕ್ಬರ್ ಅವರನ್ನು ಹಂಗಾಮಿ ಅಧ್ಯಕ್ಷರಾಗಿ, ಇರಾನ್‌ನ ಸರ್ವೋಚ್ಛ ನಾಯಕ ಅಯತೊಲ್ಲಾ ಅಲಿ ಖಮೇನಿ ನೇಮಿಸಿದರು.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಿಗ್ಗೆ ೭.೦೫ ಕ್ಕೆ <>*><>**